# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1033 |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16-12-2025 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ನಗರದಲ್ಲಿ ಈಗಾಗಲೇ ಕೈಗೊಳ್ಳಲಾಗಿರುವ ಒಳಚರಂಡಿ ಕಾಮಗಾರಿಗಳು ಅವೈಜ್ಞಾನಿಕವಾಗಿದ್ದು, ಇವುಗಳನ್ನು ಸರಿಪಡಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು: | ಕೋಲಾರ ನಗರದ ಭೌಗೋಳಿಕ ಮಟ್ಟಗಳ ಅನ್ವಯ ನಗರವನ್ನು ಎರಡು ಜೋನ್ ಗಳಾಗಿ ವಿಂಗಡಿಸಲಾಗಿದೆ. ಒಳಚರಂಡಿ ಕೊಳವೆಗಳಲ್ಲಿ ಹರಿಯುವ ತ್ಯಾಜ್ಯ ನೀರು ಗುರುತ್ವಾಕರ್ಷಣ ಕೊಳವೆ ಮಾರ್ಗದಿಂದ ವೆಟ್ ವೆಲ್ ಗೆ ಹರಿದು ನಂತರ ಏರು ಕೊಳವೆ ಮಾರ್ಗದ ಮೂಲಕ ತ್ಯಾಜ್ಯ ನೀರು ಶುದ್ಧೀಕರಣ ಘಟಕಕ್ಕೆ ಹರಿಸಿ ನೀರನ್ನು ಶುದ್ಧೀಕರಿಸಲು ವಿನ್ಯಾಸಿಸಲಾಗಿದೆ. ಒಳಚರಂಡಿ ಕಾಮಗಾರಿಗಳು ಅವೈಜ್ಞಾನಿಕವಾಗಿರುವುದಿಲ್ಲ.<br><br>ಜಲಶುದ್ಧಿ ಅಭಿಯಾನ ಯೋಜನೆಯಡಿಯಲ್ಲಿ ರಾಷ್ಟ್ರೀಯ ಹಸಿರು ನ್ಯಾಯಾಧೀಕರಣ ಪ್ರಾಧಿಕಾರ ಪರಿಸರ ಪರಿಹಾರ ನಿಧಿಯಡಿಯಲ್ಲಿ ಕೋಲಾರ ನಗರಕ್ಕೆ ಒಳಚರಂಡಿ ವ್ಯವಸ್ಥೆಯ ಅಭಿವೃದ್ಧಿ/ ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ರೂ.60.00 ಕೋಟಿಗಳು ಅನುದಾನ ಅನುಮೋದನೆಗೊಂಡಿರುತ್ತದೆ ಅದರಂತೆ, ಕೋಲಾರ ನಗರದಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಉನ್ನತೀಕರಣಗೊಳಿಸುವ ಸಲುವಾಗಿ ಬಿಟ್ಟು ಹೋಗಿರುವ ಒಳಚರಂಡಿ ಕೊಳವೆ ಮಾರ್ಗಗಳ ನಿರ್ಮಾಣ ಹಾಗೂ 23.5 MLD ಸಾಮರ್ಥ್ಯದ ತ್ಯಾಜ್ಯ ನೀರು ಸಂಸ್ಕರಣಾ ಘಟಕ (STP) ವನ್ನು ನಿರ್ಮಾಣ ಮಾಡುವ ಕಾಮಗಾರಿಗೆ ಟೆಂಡರ್ ಆಹ್ವಾನಿಸಲಾಗಿರುತ್ತದೆ. |
| ಆ) | ಈ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ಒಳಚರಂಡಿಗಳು ತುಂಬಿ, ಕೊಳಚೆ ನೀರು ರಸ್ತೆ ಮೇಲೆ ಹರಿಯುತ್ತಿದ್ದು, ಇದರಿಂದ ಪಟ್ಟಣದ ರಸ್ತೆಗಳಲ್ಲಿ ಕೊಳಚೆ ನೀರು ಹರಿದು ಸೊಳ್ಳೆಗಳು ಉತ್ಪತ್ತಿಯಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪ್ರಭಾವ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಇ) | ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದ ನಗರಸಭೆ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು; | ಈ ವಿಷಯವಾಗಿ ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ. |

| | | |
|---|---|---|
| ಈ | ನಗರದಲ್ಲಿ ಒಳಚರಂಡಿಯಿಂದ ಕೊಳಚೆ ನೀರು ತುಂಬಿ ರಸ್ತೆ ಮೇಲೆ ಹರಿಯುತ್ತಿರುವ ಮಾರ್ಗಗಳ ದುರಸ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಕೋಲಾರ ನಗರಸಭೆ ವತಿಯಿಂದ 2024-25ನೇ ಸಾಲಿನಿಂದ ನಗರ ವ್ಯಾಪ್ತಿಯಲ್ಲಿ 2 ಪ್ಯಾಕೇಜ್‌ವಾರು ನಿರ್ವಹಣೆ ಕೆಲಸಗಳಿಗೆ ಟೆಂಡರ್ ವಹಿಸಲಾಗಿರುತ್ತದೆ. ನಗರ ವ್ಯಾಪ್ತಿಯಲ್ಲಿ ಪ್ರಮುಖವಾಗಿ ಎನ್.ಹೆಚ್.ಎ.ಐ ಬೈಪಾಸ್ ರಸ್ತೆಯಲ್ಲಿ ಒಳಚರಂಡಿ ಸಂಪರ್ಕ ಕೊಳವೆಯ ಮಾರ್ಗದ ದುರಸ್ತಿ ಕೆಲಸಗಳನ್ನು ಹಂತ-ಹಂತವಾಗಿ ನಿರ್ವಹಿಸಲಾಗುತ್ತಿರುತ್ತದೆ. |

ಸಂಖ್ಯೆ: ನಅಇ 06 ಸಿಎಸ್‌ಎಸ್ 2026

**(ಬಿ.ಎಸ್.ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು